ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 06 ನೇ ಮಾರ್ಚ್, 2020

ಪ್ರವಾಸೋದ್ಯಮ ಇಲಾಖೆಯಲ್ಲಿನ ಕಳೆದ 3 ವರ್ಷಗಳ ಅನುದಾನ ಕುರಿತು

ಶ್ರೀ ಹೆಚ್. ಎಂ. ರಮೇಶಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :-

060 (380) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಪ್ರವಾಸೋದ್ಯಮ ಅಭಿವೃದ್ಧಿಗಾಗಿ ಕಳೆದ 3 ವರ್ಷಗಳಲ್ಲಿ ಮಂಜೂರಾದ, ಬಿಡುಗಡೆಗೊಳಿಸಿದ ಹಾಗೂ ಬಾಕಿ ಉಳಿದಿರುವ ಅನುದಾನವೆಷ್ಟು ;

(ಆ) ಹಿಂದುಳಿದ ಉತ್ತರ ಕರ್ನಾಟಕ, ಹೈದರಾಬಾದ್-ಕರ್ನಾಟಕ ಹಾಗೂ ಮುಂಬೈ-ಕರ್ನಾಟಕ ಪ್ರದೇಶಗಳ ಪ್ರವಾಸಿ ತಾಣಗಳ ಅಭಿವೃದ್ಧಿಗೆ ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ರಾಜ್ಯದ ಬಹಳಷ್ಟು ಪ್ರವಾಸಿ ತಾಣಗಳಲ್ಲಿ ಪ್ರವಾಸಿಗಳಿಗೆ ಅಗತ್ಯವಿರುವ ಮೂಲಸೌಕರ್ಯವಿಲ್ಲ ಎನ್ನುವ ದೂರುಗಳು ಕೇಳಿ ಬಂದಿದ್ದು, ಇದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ?